ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1238

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 17.03.2020

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿರುವ ಬಿ.ಪಿ.ಎಲ್, ಎ.ಪಿ.ಎಲ್ ಮತ್ತು ಅಂತ್ಯೋದಯ ಯೋಜನೆಯಲ್ಲಿನ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು; (ವರ್ಗವಾರು ವಿವರ ನೀಡುವುದು)	ರಾಜ್ಯದಲ್ಲಿ 10,93,751 ಅಂತ್ಯೋದಯ (ಎಎವೈ) ಪಡಿತರ ಚೀಟಿಗಳು 1,16,08,196 ಆದ್ಯತಾ (ಪಿಹೆಚ್ ಹೆಚ್) ಪಡಿತರ ಚೀಟಿಗಳು ಹಾಗೂ 20,39,437 ಆದ್ಯತೇತರ ಪಡಿತರ (ಎನ್ ಪಿಹೆಚ್ ಹೆಚ್) ಚೀಟಿಗಳು ಹೀಗೆ ಒಟ್ಟು 1,47,41,384 ಪಡಿತರ ಚೀಟಿಗಳಿವೆ. ಜಿಲ್ಲಾವಾರು ಮಾಹಿತಿ ಅನುಬಂಧದಲ್ಲಿ ಲಗತ್ತಿಸಿದೆ.
ಆ	ಸದರಿ ಯೋಜನೆಗಳ ಮಾನದಂಡಗಳೇನು;	ಸರ್ಕಾರಿ ಆದೇಶ ಸಂಖ್ಯೆ: ಆನಾಸ 116 ಡಿಆರ್ ಎ 2015, ಬೆಂಗಳೂರು, ದಿನಾಂಕ: 25/03/2017 ಮತ್ತು 20/05/2017 ರಂತೆ ಈ ಕೆಳಕಂಡ ಹೊರಗಿಡುವ ಮಾನದಂಡಗಳನ್ನು ಆಧರಿಸಿ ಆದ್ಯತಾ ಪಡಿತರ ಚೀಟಿ ಪಡೆಯಬಹುದು. 1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ, ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ: ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು. 2. ಗ್ರಾಮೀಣ ಪ್ರದೇಶದಲ್ಲಿ 3 ಹೆಕ್ಟೇರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶದಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು. 3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ, ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು. 4. ಕುಟುಂಬದ ವಾರ್ಷಿಕ ಆದಾಯವು ರೂ.1.20 ಲಕ್ಷ ಹಾಗೂ ಹೆಚ್ಚಿಗೆ ಇರುವ ಕುಟುಂಬಗಳು. ಮೇಲ್ಕಂಡ ಮಾನದಂಡಗಳಿಗೆ ಒಳಪಡುವವರು ಆದ್ಯತೇತರ (ಎನ್ ಪಿಹೆಚ್ ಹೆಚ್) ಪಡೆಯಲು ಅರ್ಹರಿರುತ್ತಾರೆ.

ಇ	ಸದರಿ ಯೋಜನೆಯಡಿ ಪ್ರತಿ ಫಲಾನುಭವಿಗಳಿಗೆ ಮಾಸಿಕ ನೀಡುತ್ತಿರುವ ಆಹಾರ ಧಾನ್ಯಗಳ ಪ್ರಮಾಣವೆಷ್ಟು; (ವರ್ಗವಾರು ವಿವರ ನೀಡುವುದು)	ಪ್ರತಿ ಅಂತ್ಯೋದಯ ಪಡಿತರ ಚೀಟಿಗೆ 35 ಕೆ.ಜಿ. ಅಕ್ಕಿ ಉಚಿತವಾಗಿ, ಆದ್ಯತಾ ಪಡಿತರ ಚೀಟಿ (ಪಿಹೆಚ್ ಹೆಚ್) ಯ ಪ್ರತಿ ಸದಸ್ಯರಿಗೆ ತಲಾ 7 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುತ್ತಿದೆ. ಆದ್ಯತೇತರ (ಎನ್ ಪಿಹೆಚ್ ಹೆಚ್) ಪಡಿತರ ಚೀಟಿದಾರರು ಪಡಿತರಕ್ಕಾಗಿ ಒಪ್ಪಿಗೆ ನೀಡಿರುವವರು ಪ್ರತಿ ಮಾಹೆ ಪ್ರತಿ ಕೆ.ಜಿ.ಗೆ ರೂ.15/-ರಂತೆ ಪಡಿತರ ಚೀಟಿಯಲ್ಲಿನ ಏಕ ಸದಸ್ಯರಿಗೆ 5 ಕೆ.ಜಿ ಅಕ್ಕಿ ಹಾಗೂ ಎರಡಕ್ಕಿಂತ ಹೆಚ್ಚು ಸದಸ್ಯರಿಗೆ 10 ಕೆ.ಜಿ ಅಕ್ಕಿಯನ್ನು ವಿತರಿಸಲಾಗುತ್ತಿದೆ.
ಈ	ಕಳಪೆ ಆಹಾರ ಧಾನ್ಯಗಳನ್ನು ಪೂರೈಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿರುವುದಿಲ್ಲ.
ಉ	ಕಳಪೆ ಆಹಾರ ಧಾನ್ಯಗಳ ಪೂರೈಕೆ ಬಗ್ಗೆ ಬಂದಿರುವ ದೂರುಗಳ ಸಂಖ್ಯೆ ಎಷ್ಟು; ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)	ಅನ್ವಯಿಸುವುದಿಲ್ಲ.
ಊ	ಮೇಲ್ಕಂಡ ಯೋಜನೆಗಳಲ್ಲಿ ನಕಲಿ ಪಡಿತರ ಚೀಟಿಗಳನ್ನು ಪಡೆದಿರುವವರು ಇದ್ದಾರೆಯೇ;	ಅನರ್ಹರು ಆದ್ಯತಾ (ಪಿ.ಹೆಚ್.ಹೆಚ್) ಪಡಿತರ ಚೀಟಿಗಳನ್ನು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆ.
ಋ	ಹಾಗಾದರೆ, ಅವರುಗಳ ಸಂಖ್ಯೆ ಎಷ್ಟು ಹಾಗೂ ಅವರ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?	ರಾಜ್ಯದಲ್ಲಿ ಕಳೆದ ಎಂಟು ತಿಂಗಳಿನಿಂದ ಒಟ್ಟು 63,922 ಅನರ್ಹ ಪಡಿತರ ಚೀಟಿಗಳನ್ನು ಗುರುತಿಸಿ ಅವರಿಂದ ರೂ.96,27,960/- ದಂಡವನ್ನು ಸಂಗ್ರಹಿಸಿ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿದೆ. ಅನರ್ಹರು ಪಡಿತರ ಚೀಟಿಗಳನ್ನು ಸ್ವ ಇಚ್ಛೆಯಿಂದ ಸಂಬಂಧಪಟ್ಟ ತಾಲ್ಲೂಕು/ವಲಯ ಕಛೇರಿಗಳಿಗೆ ಸಂಪರ್ಕಿಸಿ ಏಪ್ರಿಲ್-2020 ರೊಳಗೆ ಅಭ್ಯರ್ಪಣೆಯನ್ನು ಮಾಡುವಂತೆ ಕಾಲಾವಕಾಶವನ್ನು ನಿಗಧಿಪಡಿಸಲಾಗಿದೆ. ಈ ಅವಧಿ ಮುಗಿದ ನಂತರವೂ ಇಂತಹ ಅನರ್ಹರು ಅಭ್ಯರ್ಪಣೆ ಮಾಡದಿದ್ದಲ್ಲಿ ಇಲಾಖಾವತಿಯಿಂದ ಅನರ್ಹ ಪಡಿತರ ಚೀಟಿ ಹೊಂದಿರುವವರ ವಿರುದ್ಧ ದಂಡ ವಿಧಿಸಲಾಗುವುದು. ಅವಶ್ಯಕ ವಸ್ತುಗಳ ಕಾಯ್ದೆ 1955 ರಡಿ ಹೊರಡಿಸಲಾದ The prevention of unauthorised possession of ration card order 1977 ರನ್ವಯ ಪ್ರಕರಣ ದಾಖಲಿಸಲಾಗುವುದೆಂದು ಸ್ಥಳೀಯ ಮಾಧ್ಯಮಗಳ ಮೂಲಕ ಸಾರ್ವಜನಿಕರಿಗೆ ಮಾಹಿತಿ ನೀಡಲಾಗಿರುತ್ತದೆ.

ಆನಾಸ 104 ಡಿಆರ್ ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

LCQ: 1238

Annexure					
District wise Ration card details					
Districts	AAY RCs	PHH RCs	Total RCs	NPHH RCs	Total RCs
BAGALKOTE	46448	365488	411936	54761	466697
BENGALURU *	12943	495539	508482	70307	578789
BANGALORE EAST *	2468	68479	70947	81666	152613
BANGALORE NORTH *	2593	106788	109381	58786	168167
BANGALORE SOUTH *	5670	107009	112679	66247	178926
BANGALORE WEST *	4545	180804	185349	93785	279134
BENGALURU RURAL	14411	216803	231214	15181	246395
BELAGAVI	68908	1061635	1130543	292216	1422759
BALLARI	66660	528240	594900	56059	650959
BIDAR	39819	305391	345210	42372	387582
VIJAYAPURA	42445	467426	509871	65969	575840
CHAMARAJANAGARA	35759	255586	291345	10772	302117
CHIKKAMAGALURU	22638	244983	267621	53308	320929
CHITRADURGA	42535	363048	405583	25628	431211
CHIKKABALLAPURA	28627	280911	309538	11171	320709
DAKSHINA KANNADA	23182	249199	272381	160231	432612
DAVANAGERE	45589	334384	379973	31079	411052
DHARWAR	29726	349943	379669	77921	457590
GADAG	28375	225026	253401	31623	285024
KALABURAGI	63455	481061	544516	90882	635398
HASSAN	23432	429467	452899	31183	484082
HAVERI	47219	341784	389003	47436	436439
KODAGU	10115	99822	109937	27563	137500
KOLAR	29936	314617	344553	25494	370047
KOPPAL	37532	291110	328642	13423	342065
MANDYA	34599	450751	485350	46321	531671
MYSURU	50514	656215	706729	89951	796680
RAICHUR	53067	404299	457366	29782	487148
RAMANAGARA	19019	280523	299542	8866	308408
SHIVAMOGGA	37956	354191	392147	89035	481182
TUMAKURU	49499	613116	662615	49167	711782
UDUPI	28670	162016	190686	100236	290922
UTTARA KANNADA	16176	291828	308004	81870	389874
YADGIR	29221	230714	259935	9146	269081
TOTAL	1093751	11608196	12701947	2039437	14741384